ಮೂಲ ದಾವಾ ಸಂಖ್ಯೆ. 11/2025 ಪಿ ಡಬ್ಲ್ಯೂ 1

(ದಿನಾಂಕ 10-03-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು.)

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಟಿ ಹೆಚ್ ಹೆಚ್ ವಕೀಲರಿಂದಃ-

ನಾನು ನನ್ನ ಮುಖ್ಯ ವಿಚಾರಣಾ ಸಾಕ್ಷ್ಯದ ಕುರಿತು ನ್ಯಾಯಾಲಯದ ಮುಂದೆ ನನ್ನ ಸಾಕ್ಷಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಇರುತ್ತದೆ. ಅದರಲ್ಲಿರುವ ಸಂಗತಿಗಳು ಸತ್ಯವಾಗಿದ್ದು ಅದಕ್ಕೆ ನಾನೇ ಸಹಿ ಮಾಡಿದ್ದೇನೆ.

ಸರ್ವೆ ನಂ.404 ರ 5 ಕೈಬರಹ ಪಹಣಿಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ರಿಂದ 5 ಎಂದು, ಎಂ ಆರ್ ನಂ.38 ಮತ್ತು 39 ರ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾರೆಯಾಗಿ ನಿಪಿ-6 ಎಂದು, ನಕಾಶೆಯ ದೃಢೀಕೃತ ನಕಲು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಆಕಾರಬಂದ್ ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, ಸರ್ವೆ ನಂ. 404 ರ 11 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-9 ರಿಂದ 19 ಎಂದು, ಸರ್ವೆ ನಂ.404/ಎ ರ 12 ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-20 ರಿಂದ 31 ಎಂದು, ಇ ಸಿ ಹಾಜರುಪಡಿಸಿದ್ದು ಅದನ್ನು ನಿಪಿ-32 ಎಂದು, ಎಂ ಆರ್ ನಂ. ಹೆಚ್-54 ಮತ್ತು ಹೆಚ್-56 ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-33 ಮತ್ತು 34 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯವಿಚಾರಣೆಗೆ ಸಮಯಾವಕಾಶ ಕೋರಿದ್ದು ನೀಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಲಾಯಿತು.)

ಓ. ಹೇ. ಕೇ. ಸರಿ ಇದೆ,

ಸಿವಿಲ್ ಜಡ್ಜ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ